ಎಲ್ಲಾ ಆಸ್ಪತ್ರೆಗಳ ಗುಣಮಟ್ಟ ಕಳಪೆಯಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು?

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು) :

ಅ) ಬಂದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

963 Sri Veerabhadrappa Halaharavi, (Hubli-Dharwad East) : Hon'ble Minister for Urban Development, Law & Parliamentary Affairs kindly answer to the below question?

a) Whether it has come to the Notice of Government that handing over of the Hospital of Hubli-Dharwad City Corporation to Government;

b) If so, adopting the Corporation Hospitals by the Government and Up-gradation, Up-grade them, whether it has come to the Notice of Government. The quality of all the hospitals have became for low quality;

c) If it has come to the Notice, what are the action taken?

Sri S.SURESH KUMAR (Minister for Urban Development, Law & Parliamentary Affairs) :

a) –No-

b) Does not arise.

c) Does not arise.

965 ಶ್ರೀ ವೀರಭದ್ರಪ್ಪ ಹಾಲಹರವಿ, (ಹುಬ್ಬಳ್ಳಿ–ಧಾರವಾಡ ಪೂರ್ವ) : ಮಾನ್ಯ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯಲ್ಲಿ ಕುಡಿಯುವ ನೀರಿನ ಬಿಲ್ ಹೆಚ್ಚಾಗಿ ಇರುವುದನ್ನು ಹಾಗೂ ಅಧಿಕಾರಿಗಳು ಹಳೆ ಬಿಲ್ಲು ಎಂದು ಬಡ್ಡಿ ರೂಪದಲ್ಲಿ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬೆಂಗಳೂರು ಮಹಾನಗರಪಾಲಿಕೆಯಲ್ಲಿ ನೀರಿನ ಬಿಲ್ಲಿನ ಬಡ್ಡಿಯನ್ನು ಮನ್ನಾ ಮಾಡಿರುವ ರೀತಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿಯೂ ಬಡ್ಡಿ ಮನ್ನಾ ಮಾಡುವ ವಿಚಾರ ಸರ್ಕಾರದ ಗಮನದಲ್ಲಿದೆಯೇ;

ಇ) ಹಾಗಿದ್ದಲ್ಲಿ, ಯಾವ ತಿಂಗಳಿನಿಂದ ಬಡ್ಡಿ ಮನ್ನಾ ಮಾಡಲು ಕ್ರಮ ಕೈಗೊಳ್ಳಲಾಗುವುದು; ಹಾಗಿಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು) :

ಅ) ಬಂದಿದೆ.

ಆ) ಬೆಂಗಳೂರು ನಗರದ ಕೊಳಚೆ ಪ್ರದೇಶಗಳ ನಿವಾಸಿಗಳ ನೀರಿನ ಬಾಕಿಯನ್ನು ಮನ್ನಾ ಮಾಡುವ ಬಗ್ಗೆ ಮಾತ್ರ ಪರಿಶೀಲಿಸಲಾಗುತ್ತಿದೆ.

ಇ) ಉದ್ಭವಿಸುವುದಿಲ್ಲ.

920 ಶ್ರೀ ಬಿ.ಸಿ.ಪಾಟೀಲ್ : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಚಲನ ಚಿತ್ರದ ಸಿ.ಡಿ.ಮತ್ತು ವಿಡಿಯೋಗಳ ಪೈರೆಸಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಚಲನ ಚಿತ್ರದ ಸಿಡಿ ಮತ್ತು ವಿಡಿಯೋಗಳ ಪೈರೆಸಿ ತಡೆಗಟ್ಟಲು ಗೂಂಡಾ ಕಾಯಿದೆಯನ್ನು ಜಾರಿಗೆ ತರುವುದಕ್ಕೆ ಸರ್ಕಾರ ಚಿಂತನೆ ನಡೆಸಿದೆಯೇ?

ಶ್ರೀ ಡಾ.ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಹೌದು.

English version

Yes.

ಆ) ರಾಜ್ಯದಲ್ಲಿ ಚಲನ ಚಿತ್ರದ ಸಿಡಿ ಮತ್ತು ವಿಡಿಯೋಗಳ ಪೈರೆಸಿ ಸಿಡಿಗಳ ಮಾರಾಟವನ್ನು ತಡೆಗಟ್ಟಲು ಸರ್ಕಾರ ಗೂಂಡಾ ಕಾಯಿದೆಗೆ ತಿದ್ದುಪಡಿ ತರಲು ಪರಿಗಣಿಸುತ್ತಿದೆ.

English version

Government is considering amendment to Goonda Act to prevent piracy of CD and Video of films in the State.